**ಸಂಖ್ಯೆ:** ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:19.07.2020

**ಆದೇಶ**

ವಿಪತ್ತು ನಿರ್ವಹಣಾ ಕಾಯ್ದೆ, 2005ರ ಸೆಕ್ಷನ್ 69ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈ ಕೆಳಗೆ ಸಹಿ ಮಾಡಿರುವ ರಾಜ್ಯ ಕಾರ್ಯಕಾರಿ ಸಮಿತಿ(ಎಸ್‌ಇಸಿ)ಯ ಅಧ್ಯಕ್ಷನಾದ ನಾನು, ಖಾಸಗಿ ವೈದ್ಯಕೀಯ ಸಂಸ್ಥೆಗಳಲ್ಲಿನ ಸರ್ಕಾರಿ ಕೋಟಾದ ಹಾಸಿಗೆ(ಬೆಡ್)ಗಳು ರಾಜ್ಯಾದ್ಯಂತ ಸಕ್ಷಮ ಪ್ರಾಧಿಕಾರಗಳು ಕಳುಹಿಸಿದ ಕೋವಿಡ್–19 ರೋಗಿಗಳಿಗೆ ಲಭ್ಯವಿರುತ್ತದೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಅದಕ್ಕೆ ಸಂಬಂಧಿಸಿದ ಪೂರಕ ವಿಷಯಗಳನ್ನು ಗಮನಿಸಲು ವಿಪತ್ತು ನಿರ್ವಹಣಾ ಕಾಯ್ದೆ, 2005ರ ಸೆಕ್ಷನ್ 22, ಸಬ್ ಸೆಕ್ಷನ್ 2ರ ಖಂಡ (ಹೆಚ್) ಅಡಿಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರ ಪ್ರಕಾರ್ಯಗಳನ್ನು ಮತ್ತು ವಿಪತ್ತು ನಿರ್ವಹಣಾ ಕಾಯ್ದೆ, 2005ರ ಸೆಕ್ಷನ್ 24ರ (ಎಫ್), (ಹೆಚ್), (ಜೆ) ಮತ್ತು (ಎಲ್) ಖಂಡಗಳಡಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳನ್ನು ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರಿಗೆ ಈ ಮೂಲಕ ಪ್ರತ್ಯಾಯೋಜಿಸಿರುತ್ತೇನೆ. ಈ ಆದೇಶವನ್ನು 19ನೇ ಜುಲೈ 2020ರಿಂದ ಜಾರಿಗೆ ಬರುತ್ತದೆಂದು ಭಾವಿಸತಕ್ಕದ್ದು.

**(ಟಿ.ಎಂ. ವಿಜಯ್ ಭಾಸ್ಕರ್)**
ಮುಖ್ಯ ಕಾರ್ಯದರ್ಶಿ ಮತ್ತು ಅಧ್ಯಕ್ಷರು,
ರಾಜ್ಯ ಕಾರ್ಯಕಾರಿ ಸಮಿತಿ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.